ವಿದ್ಯುತ್ ಉತ್ಪಾದನೆ ಮಾಡಿ ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಗೆ ಸರಬರಾಜು ಮಾಡುತ್ತಿದೆ.

ಇ) ಹಾಲಿ ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಗೆ ಲಭ್ಯವಿರುವ ವಿದ್ಯುತ್ತಿನ ಪ್ರಮಾಣದ ಪ್ರಕಾರ ಬೀದರ್ ಜಿಲ್ಲೆಗೆ ಸುಮಾರು 25 ಮೆ.ವ್ಯಾ.ಟ್ ವಿದ್ಯುತ್ ಪ್ರಮಾಣದ ಕೊರತೆ ಇರುತ್ತದೆ. ಹೆಚ್ಚಿನ ವಿದ್ಯುತ್ ಉತ್ಪಾದನೆಯಾದಾಗ ಲಭ್ಯತೆಯನ್ನು ಆಧರಿಸಿ ಬೀದರ್ ಜಿಲ್ಲೆಯ ಕೊರತೆ ಪ್ರಮಾಣವನ್ನು ಕಡಿಮೆಗೊಳಿಸಲು ಕ್ರಮ ಕೈಗೊಳ್ಳಲಾಗುವುದು..

ಉ) ಇಲ್ಲ

ಊ) ಉದ್ಭವಿಸುವುದಿಲ್ಲ.

796 ಶ್ರೀ ಶ್ರೀನಿವಾಸ್ ಎಂ.(ಮಂಡ್ಯ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ವಿಧಾನ ಸಭಾ ಕ್ಷೇತ್ರದಲ್ಲಿರುವ ಒಟ್ಟು ವಿದ್ಯುತ್ ಉಪ ಕೇಂದ್ರಗಳ ಸಂಖ್ಯೆ ಎಷ್ಟು ಮತ್ತು ಅವು ಎಲ್ಲಿವೆ (ವಿವರಗಳನ್ನು ನೀಡುವುದು);

ಆ) ಕಳೆದ ಮೂರು ವರ್ಷದಲ್ಲಿ ಮಂಡ್ಯ ವಿಧಾನ ಸಭಾ ಕ್ಷೇತ್ರಕ್ಕೆ ಮಂಜೂರಾದ ಹೊಸ ವಿದ್ಯುತ್ ಉಪ ಕೇಂದ್ರಗಳು ಎಷ್ಟು ಮತ್ತು ಯಾವುವು (ವಿವರಗಳನ್ನು ನೀಡುವುದು)

ಇ) ಮಂಡ್ಯ ವಿಧಾನ ಸಭಾ ಕ್ಷೇತ್ರದಲ್ಲಿರುವ ಎಲ್ಲಾ ವಿದ್ಯುತ್ ಉಪ ಕೇಂದ್ರಗಳು ಸಮರ್ಪಕವಾಗಿ ಕಾರ್ಯನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಸಮರ್ಪಕವಾಗಿ ಕಾರ್ಯನಿರ್ವಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

ಉ) ಮಂಡ್ಯ ವಿಧಾನ ಸಭಾ ಕ್ಷೇತ್ರದಲ್ಲಿರುವ ಹಲವು ವಿದ್ಯುತ್ ಉಪ ಕೇಂದ್ರಗಳು ದುರಸ್ಥಿಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಹಾಗಿದ್ದಲ್ಲಿ, ಇವುಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಋ) ಮಂಡ್ಯ ವಿಧಾನಸಭಾ ಕ್ಷೇತ್ರಕ್ಕೆ ಹೊಸದಾಗಿ ವಿದ್ಯುತ್ ಉಪಕೇಂದ್ರಗಳನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ೠ) ಹಾಗಿದ್ದಲ್ಲಿ, ಎಂದು ನೀಡಲಾಗುವುದು (ವಿವರ ನೀಡುವುದು);

ಶ್ರೀ ಕೆ.ಎಸ್. ಈಶ್ವರಪ್ಪ (ಇಂಧನ ಸಚಿವರು) :

ಅ) ಮಂಡ್ಯ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 66/11 ಕೆ.ವಿ.ಯ ಒಟ್ಟು 5 ವಿದ್ಯುತ್ ಉಪ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ವಿವರಗಳು ಕೆಳಕಂಡಂತಿವೆ.

1. ಬಸರಾಳು
2. ಹಂಪಾಪುರ
3. ಕೆ.ಐ.ಎ.ಡಿ.ಬಿ., ಮಂಡ್ಯ ನಗರ
4. ಮಂಡ್ಯ ಸಿಟಿ
5. ಚಿಕ್ಕ ಮಂಡ್ಯ

ಆ) ಕಳೆದ ಮೂರು ವರ್ಷಗಳಲ್ಲಿ ಮಂಡ್ಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಚಿಕ್ಕ ಮಂಡ್ಯದಲ್ಲಿ ಒಂದು 66/11 ಕೆ.ವಿ. ವಿದ್ಯುತ್ ಉಪ ಕೇಂದ್ರವನ್ನು ನಿರ್ಮಾಣ ಮಾಡಿ, ದಿನಾಂಕ 31-3-2008 ರಂದು ಚಾಲನೆಗೊಳಿಸಲಾಗಿರುತ್ತದೆ.

ಇ) ಮತ್ತು ಈ)

ಮಂಡ್ಯ ವಿಧಾನ ಸಭಾ ಕ್ಷೇತ್ರದಲ್ಲಿರುವ ಎಲ್ಲಾ ವಿದ್ಯುತ್ ಉಪ ಕೇಂದ್ರಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುತ್ತವೆ.

ಉ) ಮತ್ತು ಊ)

ಮಂಡ್ಯ ವಿಧಾನಸಭಾ ಕ್ಷೇತ್ರದಲ್ಲಿರುವ ಪ್ರಸ್ತುತ ಯಾವುದೇ ವಿದ್ಯುತ್ ಉಪ ಕೇಂದ್ರಗಳು ದುರಸ್ಥಿಗೊಳಪಟ್ಟಿರುವುದಿಲ್ಲ.

ಋ) ಮತ್ತು ೠ)

ಮಂಡ್ಯ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹೊಸದಾಗಿ ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

850 ಶ್ರೀ ಜಾರ್ಜ್. ಕೆ.ಜೆ. (ಸರ್ವಜ್ಞ ನಗರ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ವಜ್ಞನಗರ ವಿಧಾನ ಸಭಾ ಕ್ಷೇತ್ರದಲ್ಲಿ ಪರಿವರ್ತಕಗಳ ಕೊರತೆಯಿಂದಾಗಿ ಅಸಮರ್ಪಕ ವಿದ್ಯುತ್ ಸರಬರಾಜು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;